**ಓ.ಎಸ್. ನಂಃ 272/2022**

**ಡಿ.ಡಬ್ಲ್ಯೂಃ 1**

**ದಿನಾಂಕ 27.01.2025 ರಂದು ಸಾಕ್ಷಿದಾರರನ್ನು ಪುನಃ ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಮುಂದುವರೆದ ಪಾಟೀ ಸವಾಲುಃ ವಾದಿಯ ಪರ ಃ ಶ್ರೀ ಕೆ.ಪಿ.ಎಮ್ ವಕೀಲರಿಂದಃ**

8. ನಿಡಿ.54 ರಿಂದ 56 ರ ಅರ್ಜಿಗಳನ್ನು ನಾನು ಒಂದೇ ದಿನ ಬೆರಳಚ್ಚು ಮಾಡಿಸಿರುತ್ತೇನೆ ಎಂದರೆ ಸರಿಯಲ್ಲ. ನನ್ನ ಪಾಟೀ ಸವಾಲು ಮುಕ್ತಾಯವಾದ ನಂತರದಲ್ಲಿ ನಾನು ನಿಡಿ.54 ರಿಂದ 56 ರ ದಾಖಲೆಗಳನ್ನು ಸೃಷ್ಠಿಕೊಂಡಿರುತ್ತೇನೆ ಎಂದರೆ ಸರಿಯಲ್ಲ. ನಿಡಿ.54 ರಿಂದ 56 ರ ದಾಖಲೆಗಲ್ಲಿ ನಾನು ದಾವಾ ಮನೆಯನ್ನು ಕಟ್ಟಿಸಿರುವುದಾಗಿ ಹೇಳಿದ್ದು, ದಾವಾ ಮನೆಯನ್ನು ನಾನು ಕಟ್ಟಲು ಪಡೆದ ಕಟ್ಟಡ ಪರವಾನಿಗೆಯನ್ನು ನಾನು ನ್ಯಾಯಾಲಯಕ್ಕೆ ಹಾಜರುಪಡಿಸಿರುವುದಿಲ್ಲ.

9. ನಾನು ಮತ್ತು ನನ್ನ ಕುಟುಂಬದವರು ಸೇರಿ ದಾವಾ ಮನೆಯ ಸಂಬಂದ ವಿಭಾಗಪತ್ರದ ಮೂಲಕ ಪಾಲು ವಿಭಜನೆ ಮಾಡಿಕೊಂಡಿರುತ್ತೇವೆ ಎಂದು ನಿಡಿ.54 ರಿಂದ 56 ರ ದಾಖಲೆಗಳಲ್ಲಿ ನಮೂದಿಸಿದ್ದು, ಸದರಿ ವಿಭಾಗಪತ್ರವನ್ನು ನಾನು ನ್ಯಾಯಾಲಯಕ್ಕೆ ಹಾಜರುಪಡಿಸಿರುವುದಿಲ್ಲ. ನಿಡಿ.54 ರಿಂದ 56 ರ ದಾಖಲೆಗಳಲ್ಲಿ ಇರುವ ಮೊಹರು ಜಿಲ್ಲಾ, ತಾಲ್ಲೂಕು ಮತ್ತು ಗ್ರಾಮ ಪಂಚಾಯಿತಿಗೆ ಸೇರಿರುವ ಮೊಹರು ಅಲ್ಲ ಎಂದರೆ ಸರಿಯಲ್ಲ. ನಾನು ಸುಳ್ಳು ದಾಖಲೆಗಳನ್ನು ಸೃಷ್ಠಿಸಿ ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಮರುವಿಚಾರಣೆ ಇರುವುದಿಲ್ಲ.**

(ಸಾಕ್ಷಿ ಹೇಳಿಕೆಯನ್ನು ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದಂತೆ ಗಣಕಯಂತ್ರದಲ್ಲಿ ಬೆರಳಚ್ಚು ಮಾಡಲಾಯಿತು.)

**ಓ. ಹೇ. ಕೇ. ಸರಿ ಇದೆ.**

**ಹೆಚ್ಚುವರಿ ಸಿವಿಲ್ ಮತ್ತು ಜೆಎಂಎಫ್‌ಸಿ**
**ನ್ಯಾಯಾಧೀಶರು, ಕೆ.ಆರ್.ನಗರ.**